# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 427 (461)

ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 19.07.2024

ಉತ್ತರಿಸುವ ಸಚಿವರು : ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಭೂ ಪರಿವರ್ತಿತ 9/11 ವಿನ್ಯಾಸ ನಕ್ಷೆ ಅನುಮೋದನೆಯ ಅಧಿಕಾರವನ್ನು ಗ್ರಾಮ ಪಂಚಾಯಿತಿಗಳಿಂದ ಕಸಿದು ಯೋಜನಾ ಪ್ರಾಧಿಕಾರಕ್ಕೆ ನೀಡಿರುವುದರಿಂದ ಗ್ರಾಮೀಣ ಭಾಗದ ಬಡಜನತೆ ಮನೆ, ಕಟ್ಟಡ ನಿರ್ಮಾಣ, ಬ್ಯಾಂಕ್ ಸಾಲ ಪಡೆಯುವ ಉದ್ದೇಶದಿಂದ ಭೂ ಪರಿವರ್ತನೆ ವಿನ್ಯಾಸ ನಕ್ಷೆಗಾಗಿ ದೂರದ ಪಟ್ಟಣಗಳಿಗೆ ಅಲೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. ಯೋಜನಾ ಪ್ರಾಧಿಕಾರಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಜಮೀನುಗಳಿಗೆ ಸಂಬಂಧಿಸಿದಂತೆ ವಿನ್ಯಾಸ ಅನುಮೋದನೆ ಪ್ರಸ್ತಾವನೆಗಳನ್ನು ಸ್ವೀಕರಿಸಿದಲ್ಲಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ಹಾಗೂ ಕರ್ನಾಟಕ ಯೋಜನಾ ಪ್ರಾಧಿಕಾರಗಳ ನಿಯಮ, 1965 ರಂತೆ ಕ್ರಮವಹಿಸಬೇಕಿರುತ್ತದೆ.<br><br>ಕರ್ನಾಟಕ ಯೋಜನಾ ಪ್ರಾಧಿಕಾರಗಳ ನಿಯಮ, 1965 ರ ನಿಯಮ 36(2) ಈ ಕೆಳಕಂಡಂತಿರುತ್ತದೆ.<br><br>" (2) *The period within which a Planning Authority may sanction or refuse to sanction a layout submitted to it under Section 17 shall be ninety days from the date of its receipt by the Planning Authority*"<br><br>ಸದರಿ ಅವಕಾಶದಂತೆ ಹಾಗೂ ಅನುಮೋದಿತ ವಲಯ ನಿಯಮಾವಳಿಗಳಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ ಅಗತ್ಯ ದಾಖಲಾತಿಗಳಿಲ್ಲದೇ ಇದ್ದಲ್ಲಿ, ಅವಶ್ಯಕ ದಾಖಲಾತಿಗಳನ್ನು ಪಡೆದು 90 ದಿವಸಗಳೊಳಗಾಗಿ ಪ್ರಸ್ತಾವನೆ ಕುರಿತು ಕ್ರಮವಹಿಸಲು ಅವಕಾಶವಿರುತ್ತದೆ. |
| (ಆ) | ಬಂದಿದ್ದಲ್ಲಿ, ಗ್ರಾಮ ಪಂಚಾಯಿತಿಗಳಿಗೆ ಬಂದಿರುವ ಅರ್ಜಿಗಳನ್ನು ಯೋಜನಾ ಪ್ರಾಧಿಕಾರಕ್ಕೆ ಅನುಮೋದನೆಗಾಗಿ ಕಳುಹಿಸಿಕೊಟ್ಟರೂ ಸಮರ್ಪಕ ದಾಖಲೆಗಳ ಕೊರತೆಯ ಕಾರಣ ನೀಡಿ ಅರ್ಜಿಗಳನ್ನು ಮತ್ತೆ ಗ್ರಾಮ ಪಂಚಾಯಿತಿಗಳಿಗೆ ವಾಪಸ್ ಕಳುಹಿಸುವುದು ಹಾಗೂ ಪ್ರಾಧಿಕಾರಗಳಲ್ಲಿ ಸಿಬ್ಬಂದಿ ಕೊರತೆ ಇರುವುದರಿಂದ ನಿಗಧಿತ ಸಮಯದೊಳಗೆ ಸ್ಥಳ ಪರಿಶೀಲನೆ ಮಾಡಲು ಕೂಡ ಸಾಧ್ಯವಾಗದೆ ದೀರ್ಘಕಾಲದ ವಿಳಂಬಕ್ಕೆ ಕಾರಣವಾಗುತ್ತಿರುವ ಈ ಪ್ರಕ್ರಿಯೆ ಬದಲಿಸುವ ಕುರಿತು ಸರ್ಕಾರ ಇದುವರೆವಿಗೂ ಯಾವುದೇ ಕ್ರಮ ವಹಿಸದಿರಲು ಕಾರಣಗಳೇನು; | |
| (ಇ) | ಯಾವ ಕಾಲಮಿತಿಯೊಳಗೆ ಸದರಿ ಅವೈಜ್ಞಾನಿಕ, ಅವಾಸ್ತವಿಕ ಆದೇಶವನ್ನು ಬದಲಾಯಿಸಿ ಆ ಮೂಲಕ ಗ್ರಾಮೀಣ ಭಾಗದ ಬಡಜನತೆಗೆ ಆಗುತ್ತಿರುವ ತೊಂದರೆಯನ್ನು ನಿವಾರಿಸಲಾಗುವುದು? | ಈ ಹಿಂದೆ ಸ್ಥಳೀಯ ಯೋಜನಾ ಪ್ರದೇಶ ಘೋಷಣೆಗೊಂಡಿಲ್ಲದೆ ಇರುವ ಗ್ರಾಮ ಪಂಚಾಯತಿ ವ್ಯಾಪ್ತಿಯ ಪ್ರದೇಶಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಕೈಪಿಡಿ ಸಂ:ಗ್ರಾಅಪ 86 ಗ್ರಾಪಂಅ 2014, ದಿನಾಂಕ:11-11-2014 ರನ್ವಯ ಒಂದು ಎಕರೆ ಒಳಗಿನ ವಿಸ್ತೀರ್ಣಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಹಾಗೂ ಒಂದು ಎಕರೆ ಮೇಲ್ಪಟ್ಟ ವಿಸ್ತೀರ್ಣಕ್ಕೆ . ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ವಿನ್ಯಾಸಕ್ಕೆ ತಾಂತ್ರಿಕ ಅಭಿಪ್ರಾಯ ನೀಡಿ |

| | | | |
|---|---|---|---|
| | | | ಸಂಬಂಧಿತ ಸ್ಥಳೀಯ ಸಂಸ್ಥೆಯ ಮುಂದಿನ ಕ್ರಮಕ್ಕೆ ಕಳುಹಿಸಲು ಕ್ರಮವಹಿಸಲಾಗುತ್ತಿತ್ತು.<br><br>ಸದರಿ ಕೆಪಿಡಿಯ ಪೂರ್ವದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದಲೇ ವಿಸ್ತೀರ್ಣದ ಮಿತಿಯಿಲ್ಲದೆ ವಿನ್ಯಾಸದ ತಾಂತ್ರಿಕ ಅನುಮೋದನೆಗೆ ಕ್ರಮ ವಹಿಸಲಾಗುತ್ತಿತ್ತು.<br>ಪ್ರಸ್ತುತ ಮಾನ್ಯ ಉಚ್ಚ ನ್ಯಾಯಾಲಯದ ಆದೇಶದ ಹಿನ್ನಲೆಯಲ್ಲಿ ಸರ್ಕಾರವು ಹೊರಡಿಸಿರುವ ಆದೇಶ ಸಂಖ್ಯೆ. ನಅಇ 93 ಎಂಡಬ್ಲ್ಯೂಪಿ 2023(ಭಾ-1), ದಿನಾಂಕ: 09-01-2024 ರನ್ವಯ ವಿನ್ಯಾಸ ಅನುಮೋದನೆಗೆ ವಿಸ್ತೀರ್ಣ ಮಿತಿಯಿಲ್ಲದೆ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದಲೇ ಕ್ರಮ ವಹಿಸಬೇಕಾಗಿರುತ್ತದೆ. ದಿ:11-11-2014 ರಿಂದ ದಿ:09-01-2024 ರವರೆಗೆ ಮಾತ್ರ ಒಂದು ಎಕರೆ ಒಳಗಿನ ವಿನ್ಯಾಸಗಳಿಗೆ ಅನುಮೋದನೆ ನೀಡುವ ಅಧಿಕಾರವನ್ನು ಗ್ರಾಮ ಪಂಚಾಯಿತಿಗಳಿಗೆ ನೀಡಲಾಗಿತ್ತು.<br><br>ಮುಂದುವರೆದು, ವಿನ್ಯಾಸ ಅನುಮೋದನೆಗೆ ಸಂಬಂಧಿಸಿದಂತೆ, ಅರ್ಜಿದಾರರು ಸಂಬಂಧಿಸಿದ ಸ್ಥಳೀಯ ಸಂಸ್ಥೆಗಳಿಗೆ ಅರ್ಜಿ ಸಲ್ಲಿಸಬೇಕಿದ್ದು, ಸ್ಥಳೀಯ ಸಂಸ್ಥೆಗಳಲ್ಲಿ ತಾಂತ್ರಿಕವಾಗಿ ಪರಿಶೀಲಿಸುವ ಸಿಬ್ಬಂದಿಗಳು ಇಲ್ಲದೇ ಇರುವುದರಿಂದ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ 4-ಕೆ ಅವಕಾಶದಂತೆ ಸ್ಥಳೀಯ ಸಂಸ್ಥೆಗಳು ವಿನ್ಯಾಸ ಅನುಮೋದನೆ ಪ್ರಸ್ತಾವನೆಗಳನ್ನು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಗೆ ಸಲ್ಲಿಸುತ್ತದೆ.<br><br>ಸದರಿ ಪ್ರಸ್ತಾವನೆಗಳನ್ನು ತಾಂತ್ರಿಕವಾಗಿ ಪರಿಶೀಲಿಸಿ ವಿಳಂಬಕ್ಕೆ ಆಸ್ಪದ ಇಲ್ಲದೆ ತ್ವರಿತವಾಗಿ ತಾಂತ್ರಿಕ ಅನುಮೋದನೆ ನೀಡಿ ಸ್ಥಳೀಯ ಸಂಸ್ಥೆಗಳಿಗೆ (ಗ್ರಾಮ ಪಂಚಾಯಿತಿ) ಹಿಂದಿರುಗಿಸಲಾಗುತ್ತದೆ. ಇದರಿಂದಾಗಿ ಸಾರ್ವಜನಿಕರಿಗೆ ಯಾವುದೇ ತೊಂದರೆ ಉಂಟಾಗುತ್ತಿರುವುದಿಲ್ಲ. |

ಕಡತ ಸಂಖ್ಯೆ: ನಅಇ 256 ಮೈಅಪ್ರಾ 2024

**(ಬಿ.ಎಸ್.ಸುರೇಶ)**

ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು.